# ಕರ್ನಾಟಕ ಸರ್ಕಾರ

ಸಂಖ್ಯೆ:ಲೋಇ 50 ಇಎಪಿ 2005

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ 30-9-2005.

## ಸುತ್ತೋಲೆ

ವಿಷಯ:-ಕರ್ನಾಟಕ ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆಯಡಿ ಅಭಿವೃದ್ಧಿಗೊಳಿಸಿರುವ ರಸ್ತೆಗಳನ್ನು ವಾರ್ಷಿಕ ನಿರ್ವಹಣೆಗಾಗಿ ಲೋಕೋಪಯೋಗಿ ಇಲಾಖೆಯ ವಿಭಾಗಗಳಿಗೆ ಹಸ್ತಾಂತರಿಸುವ ಬಗ್ಗೆ.

ಉಲ್ಲೇಖ:-ಮುಖ್ಯ ಯೋಜನಾ ಅಧಿಕಾರಿಗಳು, ಕರ್ನಾಟಕ ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆರವರ ದಿನಾಂಕ 3-6-2005ರ ಪ್ರಸ್ತಾವನೆ.

ಕರ್ನಾಟಕ ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆಯಡಿ ವಿಶ್ವಬ್ಯಾಂಕ್ ನೆರವಿನೊಂದಿಗೆ ಆಯ್ದ 19 ಜಿಲ್ಲೆಗಳಲ್ಲಿ ಒಟ್ಟು ರೂ.2030.00 ಕೋಟಿಗಳ ಅಂದಾಜಿನಲ್ಲಿ ರಾಜ್ಯ ಹೆದ್ದಾರಿ ಮತ್ತು ಜಿಲ್ಲಾ ರಸ್ತೆಗಳನ್ನು ಅಭಿವೃದ್ಧಿಗೊಳಿಸುವ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿ 901 ಕಿಮೀ. ಉದ್ದದ ರಸ್ತೆಯನ್ನು ಮೇಲ್ದರ್ಜೆಗೇರಿಸುವ ಮತ್ತು 1480 ಕಿಮೀ ಉದ್ದದ ಹಾಲಿಯಿರುವ ರಸ್ತೆಯನ್ನು ಪುನಃಶ್ಚೇತನಗೊಳಿಸುವ ಗುರಿ ಹೊಂದಲಾಗಿದೆ. ಸದರಿ ಯೋಜನೆಯನ್ನು ಒಟ್ಟು 45 ಪ್ಯಾಕೇಜ್‌ಗಳಾಗಿ ವಿಂಗಡಿಸಿ, ಇಲ್ಲಿಯವರೆಗೂ 44 ಪ್ಯಾಕೇಜ್‌ಗಳ ಕಾಮಗಾರಿಗಳನ್ನು ಗುತ್ತಿಗೆದಾರರಿಗೆ ವಹಿಸಲಾಗಿದೆ. ಇದರಲ್ಲಿ 9 ಪ್ಯಾಕೇಜ್‌ಗಳ ಕಾಮಗಾರಿಗಳು ಪೂರ್ಣಗೊಂಡಿದ್ದು, ಉಳಿದ ಪ್ಯಾಕೇಜ್‌ಗಳ ಕಾಮಗಾರಿಗಳು ಪ್ರಗತಿಯಲ್ಲಿದೆ.

ಕರ್ನಾಟಕ ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆಯನ್ನು ಅನುಷ್ಠಾನಗೊಳಿಸುತ್ತಿರುವ ಯೋಜನಾ ಅನುಷ್ಠಾನ ಘಟಕವು ಮೇಲೆ ತಿಳಿಸಿರುವ ರಸ್ತೆ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಜವಾಬ್ದಾರಿ ಹೊಂದಿದ್ದು, ತದನಂತರ ರಸ್ತೆ ನಿರ್ವಹಣೆಯನ್ನು ಸಂಬಂಧಪಟ್ಟ ಲೋಕೋಪಯೋಗಿ ಇಲಾಖೆಯ ವಿಭಾಗಗಳೇ ನಿರ್ವಹಿಸಬೇಕಾಗಿರುತ್ತದೆ. ಗುತ್ತಿಗೆ ಕರಾರಿನ ಪ್ರಕಾರ ಕಾಮಗಾರಿ ಪೂರ್ಣಗೊಂಡ ನಂತರದ ಒಂದು ವರ್ಷದ ಅವಧಿಯಲ್ಲಿ ಲೋಪದೋಷ ಕಂಡುಬಂದಲ್ಲಿ (Defect liability period) ಟೆಂಡರ್ ಗುತ್ತಿಗೆದಾರರೇ ಅವರ ಖರ್ಚಿನಲ್ಲಿ ನಿವಾರಿಸಬೇಕಾಗಿರುತ್ತದೆ. ಈ ಅವಧಿಯಲ್ಲಿ ಲೋಕೋಪಯೋಗಿ ಇಲಾಖೆಗೆ ನಿರ್ವಹಣೆಯ ಬಗ್ಗೆ ಯಾವ ರೀತಿಯ ಭಾದ್ಯತೆ ಇರತಕ್ಕದಲ್ಲ.

ಮೇಲೆ ತಿಳಿಸಿರುವ ಅಂಶಗಳ ಮೇರೆಗೆ ಹಾಗೂ ರಸ್ತೆಗಳ ವಾರ್ಷಿಕ ನಿರ್ವಹಣೆಗಾಗಿ ಕರ್ನಾಟಕ ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆಯಡಿ ಪೂರ್ಣವಾಗಿ ಅಭಿವೃದ್ಧಿಗೊಳಿಸಲಾಗಿರುವ ರಸ್ತೆಗಳನ್ನು (Defect liability period) ನಂತರ ಲೋಕೋಪಯೋಗಿ ಇಲಾಖೆಯ ವಿಭಾಗೀಯ ಕಾರ್ಯಪಾಲಕ ಇಂಜಿನಿಯರುಗಳು ತಮ್ಮ ಸುಪರ್ದಿಗೆ ತೆಗೆದುಕೊಳ್ಳುವುದು ಅವಶ್ಯವಾಗಿರುತ್ತದೆ. ಆದ್ದರಿಂದ ಪೂರ್ಣಗೊಳಿಸಿರುವ ರಸ್ತೆಗಳ ಎಲ್ಲಾ ಮಾಹಿತಿಯೊಂದಿಗೆ ನಿಗದಿತ ನಮೂನೆಯಲ್ಲಿ ಹಸ್ತಾಂತರಿಸುವಂತೆ ಕಾರ್ಯಪಾಲಕ ಇಂಜಿನಿಯರ್, ಕರ್ನಾಟಕ ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆ ಹಾಗೂ ಸದರಿ ರಸ್ತೆಯನ್ನು ತಮ್ಮ ಸುಪರ್ದಿಗೆ ಹಸ್ತಾಂತರಿಸಿಕೊಳ್ಳುವಂತೆ ಸಂಬಂಧಪಟ್ಟ ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಇಂಜಿನಿಯರ್‌ಗಳಿಗೆ ಈ ಮೂಲಕ ಕೆಳಕಂಡ ಅಂಶಗಳನ್ನು ಪರಿಗಣಿಸಿ ಹಾಗೂ ಪಾಲಿಸಿ ಕ್ರಮ ಕೈಗೊಳ್ಳಲು ಸೂಚಿಸಿದೆ.

i) ಕಾಮಗಾರಿಗಳನ್ನು/ಮೈಲಿಗಲ್ಲುಗಳನ್ನು /(Mile stone) ಗುತ್ತಿಗೆದಾರರು ಗುತ್ತಿಗೆ ಕರಾರಿನನ್ವಯ ಪೂರ್ಣಗೊಳಿಸಿ, ಕರ್ನಾಟಕ ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆ ಅಧಿಕಾರಿಗಳು ಪೂರ್ಣಗೊಂಡ ಬಗ್ಗೆ ಪರಿವೀಕ್ಷಿಸಿ ಪೂರ್ಣತೆಯನ್ನು ಒಪ್ಪಿಕೊಂಡು ಈ ಬಗ್ಗೆ ಪ್ರಮಾಣ ಪತ್ರವನ್ನು ಹೊರಡಿಸಿ, ಪೂರ್ಣಗೊಂಡ ಬಗ್ಗೆ ಸಂಬಂಧಪಟ್ಟ ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಇಂಜಿನಿಯರುಗಳಿಗೆ ತಿಳಿಸುವುದು ಹಾಗೂ ಇದಕ್ಕೆ ಸಂಬಂಧಪಟ್ಟ ಎಲ್ಲಾ ಮೇಲಾಧಿಕಾರಿಗಳಿಗೆ ಹಾಗೂ ಸರ್ಕಾರಕ್ಕೆ ವರದಿ ಮಾಡುವುದು.

ii) ಕರ್ನಾಟಕ ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆಯಿಂದ ಈ ತಿಳುವಳಿಕೆ ಸ್ವೀಕರಿಸಿದ ಕೂಡಲೇ ಸಂಬಂಧಪಟ್ಟ ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಇಂಜಿನಿಯರುಗಳು ತಮ್ಮ ಅಧೀನದಲ್ಲಿರುವ ಸಂಬಂಧಿಸಿದ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಮತ್ತು ಸಹಾಯಕ ಇಂಜಿನಿಯರ್/ಕಿರಿಯ ಇಂಜಿನಿಯರ್‌ಗಳೊಂದಿಗೆ ಕರ್ನಾಟಕ ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆಯ ಸಂಬಂಧಿಸಿದ ಅಧೀಕ್ಷಕ ಇಂಜಿನಿಯರ್ ಅಥವ ಕಾರ್ಯಪಾಲಕ ಇಂಜಿನಿಯರ್ ಅವರೊಂದಿಗೆ ಪೂರ್ಣಗೊಳಿಸಿದ ಕಾಮಗಾರಿಯನ್ನು ಕೂಲಂಕಷವಾಗಿ ಜಂಟಿ ಪರಿವೀಕ್ಷಣೆ ನಡೆಸಿ, ಜಂಟಿ ಪರಿವೀಕ್ಷಣಾ ವರದಿಯನ್ನು ಎಲ್ಲಾ ಮೇಲಾಧಿಕಾರಿಗಳಿಗೆ ಹಾಗೂ ಸರ್ಕಾರಕ್ಕೆ ಸಲ್ಲಿಸುವುದು. ಈ ವೇಳೆಯಲ್ಲಿ ಯೋಜನಾ ಸಲಹೆಗಾರರು (Project Consultant) ಲೋಕೋಪಯೋಗಿ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆ ಜಂಟಿಯಾಗಿ ಪರಿವೀಕ್ಷಣೆ ನಡೆಸುವುದು

ಈ ಸಮಯದಲ್ಲಿ ಪೂರ್ಣಗೊಂಡ ಕಾಮಗಾರಿಯಲ್ಲಿ ಯಾವುದೇ ನ್ಯೂನತೆ ಕಂಡು ಬಂದಲ್ಲಿ ಅದನ್ನು ಸರಪಡಿಸಲು ಕರ್ನಾಟಕ ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆ ಅಧಿಕಾರಿಯವರು ಕೂಡಲೇ ಕ್ರಮಕೈಗೊಳ್ಳುವುದು. ಮೂಲ ಗುತ್ತಿಗೆಯಲ್ಲಿ ಸೇರ್ಪಡೆಯಾಗಿದ್ದು ಯಾವುದಾದರು ಅನಿವಾರ್ಯ ಕಾರಣದಿಂದ ಕಾಮಗಾರಿಯನ್ನು ಕೈಗೆತ್ತಿಕೊಂಡು ಪೂರ್ಣಗೊಳಿಸಲು ಸಾಧ್ಯವಾಗದೆ ಇದ್ದ ಪ್ರಸಂಗದಲ್ಲಿ ಅದಕ್ಕೆ ಕರ್ನಾಟಕ ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆಯಿಂದಲೇ ಸೂಕ್ತ ವಿವರಣೆಯನ್ನು ಒದಗಿಸತಕ್ಕದ್ದು. ನ್ಯೂನತೆಗಳನ್ನು ಸರಿಯಾಗಿ ನಿರ್ವಹಿಸಿದ ಬಗ್ಗೆ ಯೋಜನಾ ಸಲಹೆಗಾರರು ತಮ್ಮ ಸಂತೃಪ್ತಿಯನ್ನು ವ್ಯಕ್ತಪಡಿಸಬೇಕು.

ತದನಂತರ ಕರ್ನಾಟಕ ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆ ಅಧಿಕಾರಿಗಳು ಹಾಗೂ ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ಆಗಿಂದಾಗ್ಗೆ ಪರಿವೀಕ್ಷಿಸಿ ಈಗಾಗಲೇ ಕಂಡ ನ್ಯೂನತೆ ಹಾಗೂ Defects Liability Period ಸಮಯದಲ್ಲಿ ಕಂಡು ಬಂದ ನ್ಯೂನತೆಗಳನ್ನು ಸರಿಪಡಿಸಲು, ಕರ್ನಾಟಕ ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆ ಕಾಮಗಾರಿಯ ಮೂಲ ಗುತ್ತಿಗೆದಾರರಿಂದಲೇ ಅವರ ಖರ್ಚು ವೆಚ್ಚದಿಂದಲೇ ನ್ಯೂನತೆಯನ್ನು ಸರಿಪಡಿಸಲು ಸೂಕ್ತ ಕ್ರಮ ತೆಗೆದುಕೊಂಡ ನ್ಯೂನತೆಗಳನ್ನು ಸರಿಪಡಿಸಿದ ಬಗ್ಗೆ ವಿವರವಾದ ವರದಿಯನ್ನು ಮೇಲಾಧಿಕಾರಿಗಳಿಗೆ ಹಾಗೂ ಸರ್ಕಾರಕ್ಕೆ ಸಲ್ಲಿಸುವುದು. ಕೆಲಸ ಮುಗಿದ ಮೇಲೆ ಮೂರು ತಿಂಗಳಿಗೊಮ್ಮೆ ಲೋಕೋಪಯೋಗಿ ಇಲಾಖೆ, ಕರ್ನಾಟಕ ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆ ಅಧಿಕಾರಿ ಗಳು ಮತ್ತು ಯೋಜನಾ ಸಲಹೆಗಾರರು ರಸ್ತೆಗಳನ್ನು ಪರಿವೀಕ್ಷಿಸಿ ನ್ಯೂನತೆಗಳು ಇದ್ದರೆ ಸರಿಯಾಗಿ ಗುರುತಿಸಬೇಕು ಮತ್ತು ನ್ಯೂನತೆಗಳು ಕಂಡು ಬಂದರೆ ಅವುಗಳನ್ನು ಯೋಜನಾ ಸಲಹೆಗಾರರು ತೃಪ್ತಿ ಹೊಂದುವಂತೆ ಸರಿಪಡಿಸಬೇಕು.

v) ಸದರಿ ಕಾಮಗಾರಿಯ Defects Liability Period ಮುಗಿಯುವ ಒಂದು ತಿಂಗಳ ಮೊದಲು ಪುನಃ ಕರ್ನಾಟಕ ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆ ಅಧಿಕಾರಿಗಳು ಹಾಗೂ ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ಜಂಟಿ ಪರಿವೀಕ್ಷಣೆ ನಡೆಸಿ ಕಾಮಗಾರಿಯಲ್ಲಿ ಕಂಡು ದಿರಬಹುದಾದ ನ್ಯೂನತೆಗಳನ್ನು ಸರಿಪಡಿಸಿದ ಬಗ್ಗೆ ಹಾಗೂ ಯಾವುದೇ ನ್ಯೂನತೆಗಳು ಇಲ್ಲದ ಇರುವ ಬಗ್ಗೆ ಖಚಿತಪಡಿಸಿಕೊಂಡು, ಒಂದು ಪರಿವೀಕ್ಷಣೆ ನಡೆಸಿ ವರದಿಯನ್ನು ಮೇಲಾಧಿಕಾರಿಗಳಿಗೆ ಹಾಗೂ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ಸದರಿ ಕಾಮಗಾರಿಗೆ ಸಂಬಂಧಪಟ್ಟಂತೆ ಯಾವುದೇ ನ್ಯೂನತೆಗಳು ಇಲ್ಲವೆಂದು ಖಾತರಿ ಪಡಿಸಿಕೊಂಡು ಸದರಿ ರಸ್ತೆಯನ್ನು ಕರ್ನಾಟಕ ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆಯಿಂದ ಸಂಬಂಧಪಟ್ಟ ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಇಂಜಿನಿಯರ್‌ರವರಿಗೆ ಪೂರ್ಣರೀತಿಯಲ್ಲಿ ಸಂಬಂಧಪಟ್ಟ ಎಲ್ಲಾ ದಾಖಲೆಗಳೊಂದಿಗೆ ಹಸ್ತಾಂತರಿಸಲು ಕ್ರಮ ಕೈಗೊಳ್ಳುವುದು. ಇದನ್ನು ಮೇಲಾಧಿಕಾರಿಗಳಿಗೆ ಹಾಗೂ ಸರ್ಕಾರಕ್ಕೆ ವರದಿ ಮಾಡುವುದು.

ಹಲವಾರು ಕಾಮಗಾರಿಗಳು ಈಗಾಗಲೇ ಪೂರ್ಣಗೊಂಡಿದ್ದು, ಇದಕ್ಕೆ Defects Liability Period ಕೂಡ ಮುಗಿದಿರುವುದಾಗಿ ಯೋಜನಾ ಅಧಿಕಾರಿ, ಕರ್ನಾಟಕ ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆ ರವರು ತಿಳಿಸಿರುವ ಹಿನ್ನೆಲೆಯಲ್ಲಿ ಇಂತಹ ರಸ್ತೆಗಳನ್ನು ಲೋಕೋಪಯೋಗಿ ಇಲಾಖೆಯು ತೆಗೆದುಕೊಳ್ಳುವ ಸಂದರ್ಭದಲ್ಲಿ ಲೋಕೋಪಯೋಗಿ ಇಲಾಖೆ ಅಧಿಕಾರಿಗಳು, ಕರ್ನಾಟಕ ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆ ಅಧಿಕಾರಿಗಳು ಮತ್ತು ಯೋಜನಾ ಸಲಹೆಗಾರರು ಜಂಟಿ ಪರಿವೀಕ್ಷಣೆ ನಡೆಸಿ ವಿವರವಾದ ಪರಿವೀಕ್ಷಣಾ ವರದಿಯನ್ನು ಸಲ್ಲಿಸುವುದು. ಇದರ ಜೊತೆಗೆ ಸದರಿ ರಸ್ತೆಗೆ ಸಂಬಂಧಿಸಿದ ಎಲ್ಲಾ ದಾಖಲೆಗಳನ್ನು ಕರ್ನಾಟಕ ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆಯಿಂದ ಪಡೆದು ಸಂಬಂಧಿಸಿದ ಮೇಲಾಧಿಕಾರಿಗಳಿಗೆ ವರದಿ ಸಲ್ಲಿಸುವುದು. ಈ ವಿಷಯದಲ್ಲಿ ತೆಗೆದುಕೊಂಡ ಕ್ರಮದ ಬಗ್ಗೆ ಕರ್ನಾಟಕ ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆಯ ಮುಖ್ಯ ಯೋಜನಾಧಿಕಾರಿಗಳು ಸರ್ಕಾರಕ್ಕೆ ವರದಿಯನ್ನು ಸಲ್ಲಿಸುವುದು.

ಈ ಸುತ್ತೋಲೆ ಮುಟ್ಟಿದ ಬಗ್ಗೆ ತಿಳಿಸಬೇಕು.

(ಟಿ.ಸುಕುಮಾರ್)
ಸರ್ಕಾರದ ಕಾರ್ಯದರ್ಶಿ
ಲೋಕೋಪಯೋಗಿ ಇಲಾಖೆ

ಪ್ರತಿಯನ್ನು:-

1. ಮಹಾಲೇಖಪಾಲರು, (ಎ ಅಂಡ್ ಇ) ಮತ್ತು (ಆಡಿಟ್) ಕರ್ನಾಟಕ, ಬೆಂಗಳೂರು
2. ಪ್ರಧಾನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ,
3. ಸರ್ಕಾರದ ಕಾರ್ಯದರ್ಶಿ ಆರ್ಥಿಕ ಇಲಾಖೆ (ಆಯವ್ಯಯ)